(ಮೊದಲನೆಯ ಖಂಡ, ಹೆಸರು, ಅವತರಣಿಕೆಗಳು ವಿಧೇಯಕಕ್ಕೆ ಸೇರಿಸಲಾಯಿತು)

ಪುನರ್ ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಹೊರಟ್ಟಿ (ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, ಸದರಿ ವಿಧೇಯಕವನ್ನು ಅಂಗೀಕರಿಸಬೇಕೆಂದು ವಿನಂತಿಸುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ:

"2007ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ವಿಧಾನ ಪರಿಷತ್ತಿನಲ್ಲಿ ತಿದ್ದುಪಡಿಗಳೊಂದಿಗೆ ಅಂಗೀಕರಿಸಲ್ಪಟ್ಟ ರೀತ್ಯಾ ಈ ಸಭೆಯು ಪುನರ್ ಅಂಗೀಕರಿಸುವುದು".

ಪುನರ್ ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ಅನುಬಂಧ–4)

ಶ್ರೀ ಬಿ.ಎಸ್.ಹೊರಟ್ಟಿ:– ಎಲ್ಲಾ ಗೌರವಾನ್ವಿತ ಸದಸ್ಯರಿಗೆ ಕೃತಜ್ಞತೆಯನ್ನು ಸಲ್ಲಿಸುತ್ತೇನೆ.

ಶ್ರೀ ಜೆ.ಸಿ.ಮಾಧುಸ್ವಾಮಿ:– ಸಾರ್, ನನ್ನದೊಂದು ವಿಚಾರ ಇದೆ, ತೆಗೆದುಕೊಳ್ಳಿ. ನಾವು ಮೂರು ದಿವಸದಿಂದ ನಿಮಗೆ ಕೇಳುತ್ತಿದ್ದೇವೆ.

ಅಧ್ಯಕ್ಷರು:– ಬಿಲ್ಸ್ ಆದ ತಕ್ಷಣ ಅವಕಾಶ ಕೊಡುತ್ತೇನೆ.

(5) ಕರ್ನಾಟಕ ತೋಟಗಾರಿಕಾ ವಿಶ್ವವಿದ್ಯಾನಿಲಯ ವಿಧೇಯಕ, 2007 ಮಂಡನೆಗೆ ಅನುಮತಿ ಕೋರಿಕೆ ಹಾಗೂ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಶಶಿಕಾಂತ ಅಕ್ಕಪ್ಪ ನಾಯಿಕ (ತೋಟಗಾರಿಕಾ ಸಚಿವರು): ಮಾನ್ಯ ಅಧ್ಯಕ್ಷರೆ, 2007ರ ಕರ್ನಾಟಕ ತೋಟಗಾರಿಕಾ ವಿಶ್ವವಿದ್ಯಾನಿಲಯ ವಿಧೇಯಕವನ್ನು ಸಭೆ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2007ರ ಕರ್ನಾಟಕ ತೋಟಗಾರಿಕಾ ವಿಶ್ವವಿದ್ಯಾನಿಲಯ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಶಶಿಕಾಂತ ಅಕ್ಕಪ್ಪ ನಾಯಿಕ (ತೋಟಗಾರಿಕಾ ಸಚಿವರು): ಮಾನ್ಯ ಅಧ್ಯಕ್ಷರೆ, 2007ರ ಕರ್ನಾಟಕ ತೋಟಗಾರಿಕಾ ವಿಶ್ವವಿದ್ಯಾನಿಲಯ ವಿಧೇಯಕವನ್ನು ಸಭೆ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ತೋಟಗಾರಿಕಾ ವಿಶ್ವವಿದ್ಯಾನಿಲಯದ ವಿಧೇಯಕ, 2007 ಪರ್ಯಾಲೋಚನೆ ಪ್ರಸ್ತಾವ

ಶ್ರೀ ಶಶಿಕಾಂತ ಅಕ್ಕಪ್ಪ ನಾಯಿಕ (ತೋಟಗಾರಿಕಾ ಸಚಿವರು): ಮಾನ್ಯ ಅಧ್ಯಕ್ಷರೆ, 2007ರ ಕರ್ನಾಟಕ ತೋಟಗಾರಿಕಾ ವಿಶ್ವವಿದ್ಯಾನಿಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು

ಶ್ರೀ ಶಶಿಕಾಂತ ಅಕ್ಕಪ್ಪ ನಾಯಿಕ: ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯವು ತೋಟಗಾರಿಕೆಯಲ್ಲಿ ಮುಂಚೂಣಿಯಲ್ಲಿದ್ದು, ಗ್ರಾಮೀಣಾಭಿವೃದ್ಧಿಯಲ್ಲಿ ಸಕ್ರಿಯ ಪಾತ್ರ ವಹಿಸಿದೆ. ರಾಜ್ಯದಲ್ಲಿ ಸುಮಾರು 16.3 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಯನ್ನು ಬೆಳೆಯಲಾಗುತ್ತಿದ್ದು, ವಾರ್ಷಿಕ 95.81 ಲಕ್ಷ ಟನ್‌ಗಳಷ್ಟು ಉತ್ಪಾದನೆಯಾಗುತ್ತಿದೆ. ತೋಟಗಾರಿಕೆ ಪ್ರದೇಶದ ಒಟ್ಟು ಸಾಗುವಳಿ ಪ್ರದೇಶದ ಶೇಕಡ 14.4ರಷ್ಟಿದ್ದು, ತೋಟಗಾರಿಕಾ ಉತ್ಪನ್ನಗಳ ಮೌಲ್ಯ 9,000 ಕೋಟಿ ರೂಪಾಯಿಗಳಿಗೆ ಒಳಪಡುತ್ತದೆ. ಕೃಷಿ ವಲಯದ ಆಧಾರದಲ್ಲಿ ಶೇಕಡ 40ರಷ್ಟು ಆದಾಯ ತೋಟಗಾರಿಕಾ ಉತ್ಪನ್ನಗಳಿಂದಲೇ ಬರುತ್ತಿದೆ. ತೋಟಗಾರಿಕಾ ಬೆಳೆಗಳ ಉತ್ಪನ್ನಗಳನ್ನು ರಫ್ತು ಮಾಡಲು ವಿಫುಲ ಅವಕಾಶಗಳಿವೆ. ಕೃಷಿ ವಲಯದಿಂದ 2005–06ರಲ್ಲಿ ಸುಮಾರು 2,529 ಕೋಟಿಗಳಷ್ಟು ಮತ್ತು 2006–07ರಲ್ಲಿ 2,655 ಕೋಟಿ